ಕರ್ನಾಟಕ ವಿಧಾನ ಪರಿಷತ್ತು

1) ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : (333)283
2) ಸದಸ್ಯರ ಹೆಸರು : ಶ್ರೀ ಎಸ್.ನಾಗರಾಜ್ (ಸಂದೇಶ್ ನಾಗರಾಜ್) (ಸ್ಥಳೀಯ ಸಂಸ್ಥೆಗಳ ಕ್ಷೇತ್ರ)
3) ಉತ್ತರಿಸುವ ದಿನಾಂಕ : 17.07.2019
4) ಉತ್ತರಿಸುವವರು : ಅರಣ್ಯ, ಪರಿಸರ ಮತ್ತು ಜೀವಿಶಾಸ್ತ್ರ ಸಚಿವರು

ಕ್ರ ಸಂ.	ಪ್ರಶ್ನೆ	ಉತ್ತರ
(ಅ)	ಚಾಮುಂಡಿ ಬೆಟ್ಟದ ಅರಣ್ಯದಲ್ಲಿ ಎಷ್ಟು ಚಿರತೆಗಳಿವೆ; ಎಂದು ಅಂದಾಜು ಮಾಡಲಾಗಿದೆ; ಕಳೆದ ಎರಡು ವರ್ಷದಲ್ಲಿ ಈ ಚಿರತೆಗಳು ಮೈಸೂರು ನಗರಕ್ಕೆ ಮತ್ತು ಸುತ್ತಮುತ್ತಲ ಹಳ್ಳಿಗಳಿಗೆ ನುಗ್ಗಿದ ಪ್ರಕರಣಗಳ ಸಂಖ್ಯೆ ಎಷ್ಟು;	ಮೈಸೂರು ವಿಭಾಗ ವ್ಯಾಪ್ತಿಗೆ ಒಳಪಡುವ ಚಾಮುಂಡಿ ಬೆಟ್ಟದ ಅರಣ್ಯ ಪ್ರದೇಶದಲ್ಲಿ ಸುಮಾರು 3 ರಿಂದ 4 ಚಿರತೆಗಳಿರಬಹುದೆಂದು ಅಂದಾಜಿಸಲಾಗಿದೆ. ಕಳೆದ ಎರಡು ವರ್ಷದಲ್ಲಿ ಮೂರು ಬಾರಿ ಚಿರತೆಗಳು ಮೈಸೂರು ನಗರ ಮತ್ತು ಸುತ್ತಮುತ್ತಲಿನ ಹಳ್ಳಿಗಳಿಗೆ ನುಗ್ಗಿರುವ ಬಗ್ಗೆ ಪ್ರಕರಣಗಳು ದಾಖಲಾಗಿರುತ್ತವೆ.
(ಆ)	ಈ ಚಿರತೆಗಳಿಗೆ ಹಾಗೂ ಇತರೆ ಕಾಡು ಪ್ರಾಣಿಗಳಿಗೆ ಕುಡಿಯುವ ನೀರಿನ ಮತ್ತು ಆಹಾರದ ಅಭಾವ ಉಂಟಾಗಿ ಅವು ನಗರ ಮತ್ತು ಹಳ್ಳಿಗಳತ್ತ ನುಗ್ಗುತ್ತಿದ್ದು, ಚಾಮುಂಡಿ ಬೆಟ್ಟದ ಮೇಲಿರುವ ದೇವಿಕೆರೆ ಹಾಗೂ ಇತರೆ ಕೆರೆ ಕುಂಟೆಗಳಿಗೆ ನೀರು ತುಂಬಿಸಿ, ವನ್ಯಪ್ರಾಣಿಗಳಿಗೆ ನೀರಿನ ಆಸರೆ ಕಲ್ಪಿಸಲು ಕ್ರಮ ತೆಗೆದುಕೊಳ್ಳಲಾಗುವುದೇ?	ಚಾಮುಂಡಿ ಬೆಟ್ಟದ ಮೇಲಿರುವ ದೇವಿಕೆರೆ ಪ್ರದೇಶವು ಜಿಲ್ಲಾ ಆಡಳಿತಕ್ಕೆ ಒಳಪಟ್ಟಿದ್ದು, ಅರಣ್ಯ ಪ್ರದೇಶದಲ್ಲಿರುವ ಕೆರೆಗಳಲ್ಲಿ ಹೂಳು ತೆಗೆದು ನೀರು ತುಂಬಿಸುವ ಕಾರ್ಯಕ್ರಮ ಕೈಗೊಳ್ಳಲಾಗಿರುತ್ತದೆ.

ಸಂಖ್ಯೆ: ಅಪಜೀ 39 ಎಫ್‌ಡಬ್ಲ್ಯೂಎಲ್ 2019

(ಸತೀಶ್ ಎಲ್. ಜಾರಕಿಹೊಳಿ)
ಅರಣ್ಯ, ಪರಿಸರ ಮತ್ತು ಜೀವಿಶಾಸ್ತ್ರ ಸಚಿವರು